2. ಬೆಂಗಳೂರು ವಿಶ್ವವಿದ್ಯಾಲಯದ 2006–07ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು 2007–08ನೇ ಸಾಲಿನ ವಾರ್ಷಿಕ ವರದಿ. ಹಾಗೂ

3. ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ 2007–08ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು 2008–09ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತಿದ್ದೇನೆ.

XI ಶ್ರೀ ಡಿ ಸುಧಾಕರ್ (ಸಮಾಜ ಕಲ್ಯಾಣ ಸಚಿವರು) ಅವರು:

1956ರ ಕಂಪನಿಗಳ ಅಧಿನಿಯಮದ ಕಲಂ 619 (ಎ) ಪ್ರಕರಣದ ಮೇರೆಗೆ:

1. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ 2007–08ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧಾನಾ ವರದಿ. ಹಾಗೂ

2. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

(ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

XII. ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಸಹಕಾರ ಸಚಿವರು) ಅವರ ಪರವಾಗಿ:–

1962ರ ಕರ್ನಾಟಕ ರಾಜ್ಯ ಉಗ್ರಾಣ ನಿಗಮ ಅಧಿನಿಯಮದ ಕಲಂ 31(ii)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಉಗ್ರಾಣ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

XIII. ಶ್ರೀ ರೇವೂನಾಯಕ್ ಬೆಳಮಗಿ (ಪಶು ಸಂಗೋಪನೆ ಸಚಿವರು) ಅವರ ಪರವಾಗಿ:–

1956ರ ಕಂಪನಿಗಳ ಅಧಿನಿಯಮದ ಕಲಂ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ಕುರಿ ಮತ್ತು ಕುರಿ ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ 2007–08ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ ಹಾಗೂ.

2004ರ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ಅಧಿನಿಯಮದ ಕಲಂ 43ರ ಪ್ರಕರಣದ ಮೇರೆಗೆ:

1. ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್ ಇದರ 2004–05 ಮತ್ತು 2005–06ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು

XIV. ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಸಚಿವರು) ಅವರ ಪರವಾಗಿ:–

1956ರ ಕಂಪನಿಗಳ ಅಧಿನಿಯಮದ ಕಲಂ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು

XV. ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಅವರ ಪರವಾಗಿ:–

1956ರ ಕಂಪನಿಗಳ ಅಧಿನಿಯಮದ ಕಲಂ 619 (ಎ) (2)ರ ಪ್ರಕರಣದ ಮೇರೆಗೆ:

1. ಎನ್.ಜಿ.ಇ.ಎಫ್.(ಹುಬ್ಬಳ್ಳಿ) ನಿಯಮಿತ ಇದರ 2008–09ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

2. ಮೈಸೂರು ಮಿನರಲ್ಸ್ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನ ವರದಿ ಹಾಗೂ

3. ಮೈಸೂರು ಸಕ್ಕರೆ ಕಾರ್ಖಾನೆಯ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು.

4. **ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು:**

ವಿಷಯ: ನೈಸ್ ಯೋಜನೆಗೆ ಸಂಬಂಧಿಸಿದಂತೆ ರೈತರು ಮಾನ್ಯ ಮುಖ್ಯಮಂತ್ರಿಯವರ ಗೃಹ ಕಛೇರಿ ಕೃಷ್ಣಾ ಎದರು ನಡೆಸುತ್ತಿದ್ದ ಪ್ರತಿಭಟನೆ ಮೇಲೆ ಪೋಲಿಸರು ನಡೆಸಿದ ಲಾಠಿ ಪ್ರಹಾರದ ಬಗ್ಗೆ.

ಶ್ರೀ ಎ ಎಸ್ ಪಾಟೀಲ್ (ನಡಹಳ್ಳಿ) (ದೇವರಹಿಪ್ಪರಗಿ): ಮಾನ್ಯ ಅಧ್ಯಕ್ಷರೆ, ದಿನಾಂಕ 27.06.2010ರಂದು ಮಾನ್ಯ ಮುಖ್ಯಮಂತ್ರಿಯವರ ಗೃಹ ಕಛೇರಿ ಕೃಷ್ಣಾ ಎದುರು ಮತ್ತು ಹೆಮ್ಮಿಗೆಪುರ ಬಳಿ ನೈಸ್ ರಸ್ತೆಯಲ್ಲಿ ನೈಸ್ ಯೋಜನೆಗೆ ಸಂಬಂಧಿಸಿದಂತೆ ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದ ಸಂದರ್ಭದಲ್ಲಿ ರೈತರ ಮೇಲೆ ಲಾಠಿ ಪ್ರಹಾರ ನಡೆಸಿ ಪೊಲೀಸರು ಮನಬಂದಂತೆ ಹೊಡೆದಿದ್ದಾರೆ, ಅವರ ಲಾಠಿ ಏಟಿಗೆ ಬೆದರಿದ ರೈತರು ಸ್ಥಳದಿಂದ ಓಡಿ ಹೋದರೂ ಕೂಡ ಬಿಡದೆ ಪೊಲೀಸ್‌ನವರು ಅವರ ಬೆನ್ನುಹತ್ತಿ ಹಿಡಿದು ಕಬ್ಬಿಣದ ಸಲಾಕೆಗಳಿಂದ ಥಳಿಸಿದ್ದಾರೆ ಮತ್ತು ಅವರಿಂದ ತಪ್ಪಿಸಿಕೊಳ್ಳುವುದಕ್ಕೆ ಆಶ್ರಯ ಅರಸಿ ಬೇರೆ ಬೇರೆ ಮನೆಗಳಿಂದ ರೈತರು ನುಗ್ಗಿ ಹೋದರೂ ಕೂಡ ಅವರನ್ನು ಬಿಡದೆ ಪೊಲೀಸ್‌ನವರು ಮನಬಂದಂತೆ ಥಳಿಸಿದ್ದಾರೆ ಮತ್ತು ರೈತರ ಮೇಲೆ ಹಲ್ಲೆ ಮಾಡಿ ಇಲ್ಲಸಲ್ಲದ ಕೇಸುಗಳನ್ನು ಹಾಕಿ ಭಯದ ವಾತಾವರಣ ಸೃಷ್ಟಿ ಮಾಡಿದ್ದರ ಬಗ್ಗೆ ನಾನು ಸರ್ಕಾರದ ಗಮನ ಸೆಳೆಯಬಯಸುತ್ತೇನೆ. ಇದು ಎಲ್ಲಾ ಟಿ.ವಿ. ಮಾಧ್ಯಮಗಳಲ್ಲೂ ಗಂಭೀರವಾಗಿ ಪ್ರಚಾರವಾಗಿದೆ, ಪತ್ರಿಕೆಗಳಲ್ಲೂ ಬಂದಿದೆ. ಅದರ ಬಗ್ಗೆ ಸರ್ಕಾರ ಸ್ಪಷ್ಟವಾಗಿ ಉತ್ತರ ಕೊಡಬೇಕೆಂದು ತಮ್ಮ ಮೂಲಕ ಕೇಳಿಕೊಳ್ಳುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು) (ಗೃಹ ಮತ್ತು ಮುಜರಾಯಿ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ,

ತಲಘಟ್ಟಪುರ ಪೊಲೀಸ್ ಠಾಣಾ ವ್ಯಾಪ್ತಿಯ ಬಿ.ಎಂ.ಐ.ಸಿ. ನೈಸ್ ಕಾರಿಡಾರ್. ವಿವಾದದ ಹಿನ್ನಲೆಯಲ್ಲಿ ಹೆಮ್ಮಿಗೆಪುರ ಹಾಗೂ ಅಕ್ಕಪಕ್ಕದ